ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 2 ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: [illegible]    ದಿನಾಂಕ : DATE : 9/4/2021

# ಸಾವಿನ ಪ್ರಮಾಣ ಕಡಿಮೆ: ಕೇಂದ್ರ ಸಮಾಧಾನ

9/4/21

**ಬೆಂಗಳೂರು:** ರಾಜ್ಯದಲ್ಲಿ ಕೊರೊನಾ ಪ್ರಕರಣಗಳು ಹೆಚ್ಚುತ್ತಿದ್ದರೂ ಸಾವಿನ ಪ್ರಮಾಣ 0.50 ರಷ್ಟು ಇರುವುದಕ್ಕೆ ಕೇಂದ್ರ ಸರ್ಕಾರ ಸಮಾಧಾನ ವ್ಯಕ್ತಪಡಿಸಿದೆ.

ಪ್ರಧಾನಿ ನರೇಂದ್ರ ಮೋದಿ ಗುರುವಾರ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ನಡೆಸಿದ ವಿಡಿಯೊ ಕಾನ್ಫರೆನ್ಸ್‌ನಲ್ಲಿ, ರಾಜ್ಯದಲ್ಲಿ ಕೋವಿಡ್ 19ರ ಪರಿಸ್ಥಿತಿ ಹಾಗೂ ಈ ಸಾಂಕ್ರಾಮಿಕದ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳ ಕುರಿತು ಮುಖ್ಯಮಂತ್ರಿ ಯಡಿಯೂರಪ್ಪ ಮಾಹಿತಿ ಒದಗಿಸಿದರು. ಬೆಂಗಳೂರು ಮತ್ತು ಇತರ 6 ಜಿಲ್ಲೆಗಳಲ್ಲಿ ಹೆಚ್ಚು ಕೋವಿಡ್ ಪ್ರಕರಣಗಳು ವರದಿಯಾಗುತ್ತಿವೆ. ಕೋವಿಡ್ ಪಾಸಿಟಿವ್ ಪ್ರಕರಣಗಳು ಹೆಚ್ಚುತ್ತಿದ್ದರೂ, ಮರಣ ಪ್ರಮಾಣ ರಾಜ್ಯದಲ್ಲಿ ಶೇ. 0.50 ಇರುವುದು ಸಮಾಧಾನದ ಸಂಗತಿ. ಈ ಕುರಿತು ಕೇಂದ್ರ ಸರ್ಕಾರವೂ ತೃಪ್ತಿ ವ್ಯಕ್ತಪಡಿಸಿದೆ.

ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಯುವಜನರು ಮುನ್ನೆಚ್ಚರಿಕೆ ಕ್ರಮಗಳನ್ನು ತಪ್ಪದೆ ಪಾಲಿಸುವಂತೆ ಸಲಹೆ ನೀಡಿದರು. ಕೋವಿಡ್ ಜಾಗೃತಿ ಮೂಡಿಸುವ ಕಾರ್ಯಗಳಲ್ಲಿ ಪ್ರಸಿದ್ಧ ವ್ಯಕ್ತಿಗಳು, ಸಮಾಜದ ಮೇಲೆ ಪ್ರಭಾವ ಬೀರುವ ವ್ಯಕ್ತಿಗಳ ಸಹಯೋಗ ಪಡೆಯಲು ಸೂಚಿಸಿದರು. ಪರೀಕ್ಷೆಗಳ ಸಂಖ್ಯೆ ಹೆಚ್ಚಿಸುವಂತೆ ಹಾಗೂ ನಿಖರತೆ, ಮೈಕ್ರೋ ಕಂಟೈನ್ಮೆಂಟ್ ವಲಯಗಳಿಗೆ ಆದ್ಯತೆ ನೀಡುವುದು, ಆಂಬ್ಯುಲೆನ್ಸ್, ಆಕ್ಸಿಜನ್ ಪೂರೈಕೆ ಹಾಗೂ ವೆಂಟಿಲೇಟರ್ ಸೌಲಭ್ಯಗಳಿಗೆ ಆದ್ಯತೆ ನೀಡುವಂತೆ ಸಲಹೆ ನೀಡಿದ್ದಾರೆ.

ಲಸಿಕೆ ಅಭಿಯಾನ ತೀವ್ರಗತಿಯಲ್ಲಿ ನಡೆಸಲಾಗುತ್ತಿದೆ. ಪ್ರತಿದಿನ ಆರು ಸಾವಿರ ಲಸಿಕಾ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಇದರಲ್ಲಿ 5400 ಸರ್ಕಾರಿ ಹಾಗೂ 600 ಖಾಸಗಿ ಆರೋಗ್ಯ ಸಂಸ್ಥೆಗಳು. ಈ ವರೆಗೆ 53 ಲಕ್ಷ ಜನರಿಗೆ ಲಸಿಕೆ ಹಾಕಲಾಗಿದೆ. 45 ವರ್ಷಕ್ಕೂ ಮೇಲ್ಪಟ್ಟ ಜನಸಂಖ್ಯೆಯ ಶೇ. 22.31ರಷ್ಟು ಜನರಿಗೆ ಲಸಿಕೆ ಹಾಕಲಾಗಿದೆ. ಈ ವರ್ಗದ ರಾಷ್ಟ್ರೀಯ ಸರಾಸರಿ ಏ.5 ರಂದು ಶೇ. 13.94 ರಷ್ಟು ಇದೆ. ರಾಜ್ಯದಲ್ಲಿ ಲಸಿಕೆಗಳು ವ್ಯರ್ಥವಾಗುವ ಪ್ರಮಾಣ ಅತಿ ಕಡಿಮೆ ಇದೆ. ಕೋವಿಡ್ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪ್ರತಿ ದಿನ ನಡೆಸುವ ಪರೀಕ್ಷೆಗಳ ಪ್ರಮಾಣ ದುಪ್ಪಟ್ಟಾಗಿದ್ದು 1.20 ಲಕ್ಷಕ್ಕೆ ಹೆಚ್ಚಿಸಲಾಗಿದೆ 42 ಸಾವಿರ ಸಾಮಾನ್ಯ ಹಾಸಿಗೆಗಳು, 30 ಸಾವಿರ ಆಮ್ಲಜನಕ ಸಂಪರ್ಕವಿರುವ ಹಾಸಿಗೆಗಳು ಹಾಗೂ 3 ಸಾವಿರ ಐಸಿಯುಗಳು ಮತ್ತು 2900 ವೆಂಟಿಲೇಟರ್‌ಗಳಿರುವ ಹಾಸಿಗೆಗಳು ಲಭ್ಯವಿದೆ. ಮುಂಜಾಗ್ರತೆ ಕ್ರಮವಾಗಿ ಪಿಎಂ–ಕೇರ್ಸ್ ನಿಧಿಯಿಂದ ಆಕ್ಸಿಜನ್ ಜನರೇಟರುಗಳನ್ನು ಒದಗಿಸುವಂತೆ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ.